# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 734 |
| ವಿಧಾನ ಪರಿಷತ್ತಿನ ಸದಸ್ಯರ ಹೆಸರು | : | ಶ್ರೀ ಹೆಚ್. ಎಂ. ರಮೇಶ ಗೌಡ<br>(ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | : | 10.03.2020 |
| ಉತ್ತರಿಸುವ ಸಚಿವರು | : | ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ ಇಲಾಖಾ ಸಚಿವರು. |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ | ರಾಜ್ಯದಲ್ಲಿ ಕಳೆದ 3 ವರ್ಷಗಳಲ್ಲಿ ಸರ್ಕಾರ ಎಷ್ಟು ಪಡಿತರ ಚೀಟಿಗಳನ್ನು ವಿತರಿಸಿದೆ; (ವಿವರ ನೀಡುವುದು) | ಕಳೆದ 3 ವರ್ಷದಲ್ಲಿ ರಾಜ್ಯದಲ್ಲಿ 8,72,137 ಆದ್ಯತಾ (ಬಿಪಿಎಲ್) ಪಡಿತರ ಚೀಟಿಗಳು ಹಾಗೂ 2,20,393 ಆದ್ಯತೇತರ (ಎಪಿಎಲ್) ಪಡಿತರ ಚೀಟಿಗಳು ಹೀಗೆ ಒಟ್ಟು 10,92,530 ಪಡಿತರ ಚೀಟಿಗಳನ್ನು ವಿತರಿಸಲಾಗಿದೆ.<br>ಜಿಲ್ಲಾವಾರು ಮಾಹಿತಿಯನ್ನು ಅನುಬಂಧ- 1 ಮತ್ತು 2ರಲ್ಲಿ ಲಗತ್ತಿಸಿದೆ. |
| ಆ | ರಾಜ್ಯದಲ್ಲಿ ಒಟ್ಟು ಎಷ್ಟು ಅಕ್ರಮ ಪಡಿತರ ಚೀಟಿಯನ್ನು ಸರ್ಕಾರ ವಶಪಡಿಸಿಕೊಂಡಿದೆ; | ಕಳೆದ ಎಂಟು ತಿಂಗಳಿಂದ ರಾಜ್ಯದಲ್ಲಿ ಒಟ್ಟು 63,922 ಅನರ್ಹ ಪಡಿತರ ಚೀಟಿಗಳನ್ನು ರದ್ದುಪಡಿಸಲಾಗಿದೆ. |
| ಇ | ಬಿ.ಪಿ.ಎಲ್ ಕಾರ್ಡು ಪಡೆಯಲು ಇರುವ ಮಾನದಂಡಗಳು ಏನು; | ಸರ್ಕಾರದ ಆದೇಶ ಸಂಖ್ಯೆ: ಆನಾಸ 116 ಡಿಆರ್ ಎ 2015, ಬೆಂಗಳೂರು, ದಿನಾಂಕ: 25/03/2017 ಮತ್ತು 20/05/2017ರಂತೆ ಈ ಕೆಳಕಂಡ ಸೌಲಭ್ಯಗಳನ್ನು ಹೊಂದಿರುವವರನ್ನು ಹೊರತುಪಡಿಸಿ ಇನ್ನಿತರರು ಆದ್ಯತಾ ಪಡಿತರ ಚೀಟಿ ಪಡೆಯಬಹುದು.<br>1. ಸರ್ಕಾರದ ಅಥವಾ ಸರ್ಕಾರದಿಂದ ಅನುದಾನವನ್ನು ಪಡೆಯುತ್ತಿರುವ ಸಂಸ್ಥೆಗಳು ಅಥವಾ ಸರ್ಕಾರಿ ಪ್ರಾಯೋಜಿತ ಸರ್ಕಾರಿ ಸ್ವಾಮ್ಯದ ಸಂಸ್ಥೆಗಳು/ಮಂಡಳಿಗಳು/ ನಿಗಮಗಳು/ ಸ್ವಾಯತ್ತ ಸಂಸ್ಥೆಗಳು ಇತ್ಯಾದಿಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ನೌಕರರು ಆದಾಯ ತೆರಿಗೆ/ಸೇವಾ ತೆರಿಗೆ/ ವ್ಯಾಟ್/ವೃತ್ತಿ ತೆರಿಗೆ ಪಾವತಿಸುವ ಎಲ್ಲಾ ಕುಟುಂಬಗಳು.<br>2. ಗ್ರಾಮೀಣ ಪ್ರದೇಶದಲ್ಲಿ 3 ಹೆಕ್ಟೇರ್ ಒಣಭೂಮಿ ಅಥವಾ ತತ್ಸಮಾನ ನೀರಾವರಿ ಭೂಮಿ ಹೊಂದಿರುವ ಕುಟುಂಬಗಳು ಅಥವಾ ಗ್ರಾಮೀಣ ಪ್ರದೇಶವನ್ನು ಹೊರತುಪಡಿಸಿ ನಗರ ಪ್ರದೇಶದಲ್ಲಿ 1000 ಚದರ ಅಡಿಗಿಂತಲೂ ಹೆಚ್ಚಿನ ವಿಸ್ತೀರ್ಣದ ಪಕ್ಕಾ ಮನೆಯನ್ನು ಸ್ವಂತವಾಗಿ ಹೊಂದಿರುವ |

| | | |
|---|---|---|
| | | ಕುಟುಂಬಗಳು.<br>3. ಜೀವನೋಪಾಯಕ್ಕಾಗಿ ಸ್ವತಃ ಓಡಿಸುವ ಒಂದು ವಾಣಿಜ್ಯ ವಾಹನವನ್ನು ಅಂದರೆ ಟ್ರಾಕ್ಟರ್, ಮ್ಯಾಕ್ಸಿಕ್ಯಾಬ್, ಟ್ಯಾಕ್ಸಿ ಇತ್ಯಾದಿಗಳನ್ನು ಹೊಂದಿದ ಕುಟುಂಬವನ್ನು ಹೊರತುಪಡಿಸಿ, ನಾಲ್ಕು ಚಕ್ರದ ವಾಹನಗಳನ್ನು ಹೊಂದಿರುವ ಎಲ್ಲಾ ಕುಟುಂಬಗಳು.<br>4. ಕುಟುಂಬದ ವಾರ್ಷಿಕ ಆದಾಯವು ರೂ.1.20 ಲಕ್ಷ ಹಾಗೂ ಹೆಚ್ಚಿಗೆ ಇರುವ ಕುಟುಂಬಗಳು. |
| ಈ | ಬಯೋಮೆಟ್ರಿಕ್ ವ್ಯವಸ್ಥೆಯಿಂದ ಬಿ.ಪಿ.ಎಲ್ ಕಾರ್ಡುದಾರರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ? | ಜನವರಿ 2020 ರ ಮಾಹೆಯಲ್ಲಿ ಸರ್ವರ್‌ನ ತಾಂತ್ರಿಕ ದೋಷದಿಂದ ದಿನಾಂಕ:21.01.2020ರಿಂದ ತಿಂಗಳ ಕೊನೆಯವರೆಗೆ ನ್ಯಾಯಬೆಲೆ ಅಂಗಡಿಗಳಲ್ಲಿ ಸಂಪೂರ್ಣವಾಗಿ ಪಡಿತರವನ್ನು ಆನ್‌ಲೈನ್ ನಲ್ಲಿ ವಿತರಿಸಲು ಆಗಿರುವುದಿಲ್ಲ. ಸರ್ವರ್ ಸಮಸ್ಯೆ ಇರುವ ನ್ಯಾಯ ಬೆಲೆ ಅಂಗಡಿಗಳಲ್ಲಿ ಆಫ್ ಲೈನ್ ಮೂಲಕ ಪಡಿತರ ಚೀಟಿದಾರರ ಸಹಿ ಪಡೆದು ಪಡಿತರ ವಿತರಿಸಲಾಗಿದೆ. ಆಫ್ ಲೈನ್ ಮುಖಾಂತರ ವಿತರಿಸಿದ ಪಡಿತರ ಮಾಹಿತಿಯನ್ನು ನಂತರ ಆನ್‌ಲೈನ್‌ನಲ್ಲಿ ಅಪ್ ಲೋಡ್ ಮಾಡಲಾಗಿರುತ್ತದೆ. ಪ್ರಸ್ತುತ ಸರ್ವರ್ ಸಮಸ್ಯೆಯನ್ನು ಸರಿಪಡಿಸಲಾಗಿದ್ದು ಪಡಿತರ ವಿತರಣೆಯಲ್ಲಿ ಸಮಸ್ಯೆ ಇರುವುದಿಲ್ಲ. |

ಆನಾಸ 69 ಡಿಆರ್ ಎ 2020 (ಇ-ಆಫೀಸ್)

(ಕೆ.ಗೋಪಾಲಯ್ಯ)
ಆಹಾರ, ನಾಗರಿಕ ಸರಬರಾಜು ಮತ್ತು
ಗ್ರಾಹಕರ ವ್ಯವಹಾರಗಳ ಹಾಗೂ
ಕಾನೂನು ಮಾಪನಶಾಸ್ತ್ರ ಇಲಾಖಾ ಸಚಿವರು.